# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 186 |
| ಸದಸ್ಯರ ಹೆಸರು | ಮಾನ್ಯ ಶ್ರೀ ರಘುನಾಥ್ ರಾವ್ ಮಲ್ಕಾಪೂರೆ |
| ಉತ್ತರಿಸುವ ದಿನಾಂಕ: | 11.07.2018 |
| ಉತ್ತರಿಸುವ ಸಚಿವರು: | ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆಯಲ್ಲಿರುವ ಶ್ರೀ ನರಸಿಂಹ ಝರಣಿ /ಮೈಲಾರ್ ಮಲ್ಲಣಾ ದೇವಸ್ಥಾನ, ಜಿಲ್ಲೆಯ ಇತರ ದೇವಸ್ಥಾನಗಳ ಅಭಿವೃದ್ಧಿ ಹಾಗೂ ಭಕ್ತಾಧಿಗಳ ಸೌಲಭ್ಯಕ್ಕಾಗಿ ಕಳೆದ 5 ವರ್ಷಗಳಲ್ಲಿ ಘೋಷಣೆಯಾದ ಯೋಜನೆಗಳಾವುವು: ಇವುಗಳಲ್ಲಿ ಮಂಜೂರಾದ ಯೋಜನೆಗಳು ಯಾವುವು: ಈ ಯೋಜನೆಗೆ ಬಿಡುಗಡೆಯಾದ ಅನುದಾನ ಎಷ್ಟು: ಬಳಕೆಯಾಗಿರುವ ಅನುದಾನ ಎಷ್ಟು: | ಕಳೆದ ಐದು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿರುವ ಶ್ರೀ ನರಸಿಂಹ ಝರಣಿ /ಮೈಲಾರ್ ಮಲ್ಲಣಾ ದೇವಸ್ಥಾನ, ಜಿಲ್ಲೆಯ ಇತರ ದೇವಸ್ಥಾನಗಳ ಅಭಿವೃದ್ಧಿ ಹಾಗೂ ಭಕ್ತಾಧಿಗಳ ಸೌಲಭ್ಯಕ್ಕಾಗಿ ಆಯವ್ಯಯದಲ್ಲಿ ಪ್ರತ್ಯೇಕ ಘೋಷಣೆಯಾಗಿರುವುದಿಲ್ಲ.<br><br>ಆದರೆ ಬೀದರ್ ಜಿಲ್ಲೆಯಲ್ಲಿರುವ ಮುಜರಾಯಿ ದೇವಾಲಯಗಳ ಅಭಿವೃದ್ಧಿಗಾಗಿ ಈ ಕೆಳಕಂಡಂತೆ ಎರಡು ಯೋಜನೆಗಳನ್ನು ಮುಜರಾಯಿ ಇಲಾಖೆಯಿಂದ ಜಾರಿಗೆ ತರಲಾಗಿದೆ ಹಾಗೂ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಕಾಯ್ದೆ 1997 ಮತ್ತು ನಿಯಮಗಳು 2002 ರನ್ವಯ ದೇವಾಲಯದ ಆದಾಯದಿಂದ ಆಯಾಯ ದೇವಸ್ಥಾನಗಳ ಅಭಿವೃದ್ಧಿಪಡಿಸಲು ಅವಕಾಶ ಕಲ್ಪಿಸಲಾಗಿದೆ.<br><br>ಈ ಕೆಳಕಂಡ ಯೋಜನೆಗಳಡಿ ಕಳೆದ ಐದು ವರ್ಷಗಳಲ್ಲಿ ಬೀದರ್ ಜಿಲ್ಲೆಯ ಮುಜರಾಯಿ ದೇವಾಲಯಗಳಿಗೆ ಒಟ್ಟು ರೂ.132.06ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಸದರಿ ಅನುದಾನಕ್ಕೆ ಸಂಬಂಧಿಸಿದ ಕಾಮಗಾರಿಗಳು ಮುಕ್ತಾಯದ ಹಂತದಲ್ಲಿದೆ. |

(ರೂ. ಲಕ್ಷಗಳಲ್ಲಿ)

| ಯೋಜನೆ ವಿವರ | 2013-14 | 2014-15 | 2015-16 | 2016-17 | 2017-18 |
|---|---|---|---|---|---|
| ದುರಸ್ತಿ ಜೀರ್ಣೋದ್ಧಾರ/ ಅಭಿವೃದ್ಧಿ (ಸಾಮಾನ್ಯ ಅನುದಾನ) | 0.00 | 94.00 | 0.00 | 5.06 | 18.00 |
| ಸಾಮಾನ್ಯ ಸಂಗ್ರಹಣಾ ನಿಧಿಯಿಂದ ಧನ ಸಹಾಯ | 0.00 | 0.00 | 0.00 | 15.00 | 0.00 |
| ಒಟ್ಟು | 0.00 | 94.00 | 0.00 | 20.06 | 18.00 |

..2

| | | |
|---|---|---|
| ಆ | ಜಿಲ್ಲೆಯ ದೇವಸ್ಥಾನದ ಭಕ್ತಾಧಿಗಳಿಗಾಗಿ ಯಾವ್ಯಾವ ಮೂಲ ಸೌಲಭ್ಯಗಳನ್ನು ನೀಡಲಾಗಿದೆ; | ಬೀದರ್ ಜಿಲ್ಲೆಯ ಮುಜರಾಯಿ ಇಲಾಖೆಗೆ ಒಳಪಡುವ ಪ್ರವರ್ಗ 'ಎ' ಮತ್ತು 'ಬಿ' ದೇವಸ್ಥಾನಗಳಲ್ಲಿ ಭಕ್ತಾಧಿಗಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಸ್ನಾನ ಗೃಹ, ಶೌಚಾಲಯ,ಅಡುಗೆ ಕೋಣೆ, ದಾಸೋಹ ವ್ಯವಸ್ಥೆ, ಭಕ್ತಾಧಿಗಳಿಗೆ ತಂಗಲು ಛತ್ರಗಳ ನಿರ್ಮಾಣ ಮಾಡಲಾಗಿರುತ್ತದೆ.<br><br>ರಾಜ್ಯದ ಮುಜರಾಯಿ ದೇವಸ್ಥಾನಗಳಿಗೆ ಬರುವ ಭಕ್ತರಿಗೆ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯಗಳ ವ್ಯವಸ್ಥೆ; ವಸತಿ ಸೌಕರ್ಯಗಳು; ಶೆಲ್ಟರ್ ವ್ಯವಸ್ಥೆ, ಇನ್ನಿತರೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮತ್ತು ಅಧೀನ ಅಧಿಕಾರಿಗಳಿಗೆ ಧಾರ್ಮಿಕ ದತ್ತಿ ಆಯುಕ್ತರ ಸುತ್ತೋಲೆ ಸಂಖ್ಯೆ:ಸಿ.ಎನ್‌ಆರ್/1/ಸಿಆರ್/346/2010-11, ದಿನಾಂಕ:22.2.2011 ರನ್ವಯ ನಿರ್ದೇಶನ ನೀಡಲಾಗಿರುತ್ತದೆ.<br><br>ಅಲ್ಲದೆ ಪ್ರತಿ ಆರ್ಥಿಕ ವರ್ಷದಲ್ಲಿ ಸರ್ಕಾರದಿಂದ ರಾಜ್ಯದ ದೇವಾಲಯಗಳಿಗೆ ದುರಸ್ಥಿ/ ಜೀರ್ಣೋದ್ಧಾರ/ ಅಭಿವೃದ್ಧಿ ಯೋಜನೆಯಡಿ ಆಯವ್ಯಯದಲ್ಲಿ ಒದಗಿಸಿದ ಅನುದಾನವನ್ನು ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ ಬಿಡುಗಡೆ ಮಾಡಲಾಗುತ್ತಿದೆ. ಕಳೆದ ಐದು ವರ್ಷಗಳಲ್ಲಿ ಮೇಲಿನಂತೆ ಒಟ್ಟು ರೂ.132.06 ಲಕ್ಷಗಳ ಅನುದಾನವನ್ನು ಬೀದರ್ ಜಿಲ್ಲೆಯ ಮುಜರಾಯಿ ದೇವಾಲಯಗಳ ಅಭಿವೃದ್ಧಿಗೆ ಬಿಡುಗಡೆ ಮಾಡಲಾಗಿದೆ. |
| ಇ | ಬೀದರ್ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆ ವ್ಯಾಪ್ತಿಗೆ ಬರುವ ದೇವಸ್ಥಾನಗಳಲ್ಲಿ ಎಲ್ಲಿಯೂ ಮೂಲಸೌಲಭ್ಯಗಳಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು? | |

(ಸಂಖ್ಯೆ:ಕಂಇ 102 ಮುಸಪ್ರ 2018)

(ರಾಜಶೇಖರ ಬಿ. ಪಾಟೀಲ)
ಗಣಿ ಮತ್ತು ಭೂವಿಜ್ಞಾನ ಹಾಗೂ
ಮುಜರಾಯಿ ಸಚಿವರು